# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 722 (849)
2. ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 23.02.2023
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು.

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆ ಇದ್ದು, ಸುಮಾರು 10 ಲಕ್ಷ ನಿರುದ್ಯೋಗಿಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನಿರುದ್ಯೋಗ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br><br>ರಾಜ್ಯದಲ್ಲಿ ಬಂಡವಾಳ ಹೂಡಿಕೆಯನ್ನು ಆಕರ್ಷಿಸಿ ವಿವಿಧ ವಲಯಗಳ ಹುದ್ದೆಗಳ ಸೃಜನೆಗೆ ಈ ಕೆಳಕಂಡಂತೆ ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>1. ಪ್ರಸ್ತುತ ವರ್ಷದಲ್ಲಿ ರಾಜ್ಯ ಸರ್ಕಾರವು ಅನುಮೋದಿಸಿದ 393 ಕೈಗಾರಿಕಾ ಯೋಜನೆಗಳಿಂದ 2.37 ಲಕ್ಷ ಕೋಟಿ ರೂ.ಗಳ ಬಂಡವಾಳ ಹೂಡಿಕೆಯೊಂದಿಗೆ ಸುಮಾರು 2 ಲಕ್ಷ ಜನರಿಗೆ ಉದ್ಯೋಗಾವಕಾಶ ದೊರೆಯುವ ನಿರೀಕ್ಷೆ ಇದೆ.<br>2. ಕೈಗಾರಿಕಾ ನೀತಿ 2020-25ನ್ನು ದಿನಾಂಕ: 13.08.2020 ರಂದು ಘೋಷಿಸಿದ್ದು, ನೀತಿಯ ಅವಧಿಯಲ್ಲಿ ಸುಮಾರು 20 ಲಕ್ಷ ಜನರಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶವಿದೆ.<br>3. "ಇನ್ವೆಸ್ಟ್ ಕರ್ನಾಟಕ 2022-25ನ್ನು ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ"ದಿಂದ ರೂ. 9,81,784 ಕೋಟಿ ಬಂಡವಾಳ ಹೂಡಿಕೆಯಾಗಲಿದ್ದು, 4.95 ಲಕ್ಷ ಜನರಿಗೆ ಉದ್ಯೋಗಾವಕಾಶ ದೊರೆಯಲಿದೆ.<br>4. ಕರ್ನಾಟಕ ಉದ್ಯೋಗ ನೀತಿ 2022-25ನ್ನು ಹೊರತಂದಿದ್ದು, ಈ ನೀತಿಯನ್ವಯ ಹೆಚ್ಚು ಉದ್ಯೋಗವನ್ನು ನೀಡಿದ ಕೈಗಾರಿಕೆಗಳಿಗೆ ಹೆಚ್ಚಿನ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನು ಒದಗಿಸಲಾಗುತ್ತದೆ.<br>5. ಇತ್ತೀಚೆಗೆ ಕರ್ನಾಟಕ ಏರೋಸ್ಪೇಸ್ ಹಾಗೂ ಡಿಫೆನ್ಸ್ ಪಾಲಿಸಿ 2022-27ನ್ನು ಘೋಷಿಸಿದ್ದು, ಈ ನೀತಿಯ ಅವಧಿಯಲ್ಲಿ 60,000 ಜನರಿಗೆ ಉದ್ಯೋಗಾವಕಾಶ ಒದಗಿಸಲು ಉದ್ದೇಶಿಸಲಾಗಿದೆ.<br>6. ಪ್ರಸಕ್ತ ವರ್ಷದಲ್ಲಿ ರಾಯಚೂರು, ಕಲಬುರಗಿ, ವಿಜಯಪುರ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ನೂತನ ಮೆಗಾ ಜವಳಿ ಪಾರ್ಕ್ ಮತ್ತು ರಾಜ್ಯದ 25 ಸ್ಥಳಗಳಲ್ಲಿ ಮಿನಿ ಜವಳಿ ಪಾರ್ಕ್ ಗಳನ್ನು ಸಾರ್ವಜನಿಕ-ಖಾಸಗಿ ಸಹ ಭಾಗಿತ್ವದಲ್ಲಿ ಸ್ಥಾಪಿಸಲಾಗುವುದು. ಇದರಿಂದಾಗಿ, |

<table>
<tr><td></td><td></td><td>ಸುಮಾರು 25000 ಜನರಿಗೆ ಉದ್ಯೋಗ ಸೃಜನೆಯಾಗಲಿದೆ. ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿ 2019-24 ಅನ್ನು ಪರಿಷ್ಕರಿಸಲಾಗಿದ್ದು, ಅದರ ಪರಿಣಾಮವಾಗಿ ರಾಜ್ಯದಲ್ಲಿ 4292 ಕೋಟಿ ರೂ.ಗಳ ಬಂಡವಾಳ ಹೂಡಿಕೆ ಮಾಡಲು ಉದ್ಯಮಿಗಳು ಮುಂದೆ ಬಂದಿದ್ದು, ಇದರಿಂದಾಗಿ ಸುಮಾರು 44,257 ಜನರಿಗೆ ಉದ್ಯೋಗ ಸೃಜನೆಯಾಗಲಿದೆ.<br>
7. ಕರ್ನಾಟಕವು 163 ಬಿಲಿಯನ್ ಡಾಲರ್ಸ್ ಅಂದಾಜು ಮೌಲ್ಯದ 40 ಯುನಿಕಾರ್ನ್ ಗಳ ನೆಲೆಯಾಗಿದೆ. 2022-23ನೇ ಸಾಲಿನಲ್ಲಿ ಕರ್ನಾಟಕದ 6 ಸ್ಟಾರ್ಟಪ್‌ಗಳಿಗೆ ಯುನಿಕಾರ್ನ್ ಪಟ್ಟ ದೊರಕಿದೆ.<br>
8. ಐಟಿವಲಯದಲ್ಲಿ ಮುನ್ನಡೆಯನ್ನು ಕಾಯ್ದುಕೊಳ್ಳಲು ರಾಜ್ಯ ಸರ್ಕಾರವು ಕರ್ನಾಟಕ ಸ್ಟಾರ್ಟಪ್ ನೀತಿ 2022-27, ಕರ್ನಾಟಕ ಡೇಟಾ ಸೆಂಟರ್ ನೀತಿ 2022-27 ಹಾಗೂ ಕರ್ನಾಟಕ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತಾ ನೀತಿಯನ್ನು 2022 ರಲ್ಲಿ ಜಾರಿಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಜೈವಿಕ ತಂತ್ರಜ್ಞಾನ ನೀತಿ ಮತ್ತು AVGC ನೀತಿಯನ್ನು ಪರಿಷ್ಕರಿಸಲಾಗುವುದು.<br>
9. ಯುವಕರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಸ್ವಂತ ಉದ್ಯೋಗ ಪ್ರಾರಂಭಿಸಲು ಪ್ರೋತ್ಸಾಹಿಸಲಾಗುವುದು.<br>
10. ಉದ್ಯೋಗ ಮೇಳಗಳನ್ನು ಆಯೋಜಿಸಿ, ಅವಶ್ಯಕ ವಿದ್ಯಾರ್ಹತೆ/ಕುಶಲತೆ ಹೊಂದಿರುವ ಯುವ ಜನಾಂಗಕ್ಕೆ ಉದ್ಯೋಗಾವಕಾಶಗಳನ್ನು ಕಲ್ಪಿಸಲಾಗಿದೆ.<br><br>
ಹೀಗೆ ಕೈಗಾರಿಕಾ ವಲಯ, ಜವಳಿ ವಲಯ ಹಾಗೂ ಸೇವಾವಲಯಗಳಲ್ಲಿ ಬಂಡವಾಳ ಹೂಡಿಕೆಗೆ ಪ್ರಾಧಾನ್ಯತೆ ನೀಡಿ ಹೆಚ್ಚಿನ ಉದ್ಯೋಗ ಸೃಜಿಸಲು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಲಾಗಿದೆ.</td></tr>
<tr><td>ಆ</td><td>ರಾಜ್ಯದಲ್ಲಿ ಮಂಜೂರಾಗಿರುವ ಒಟ್ಟು 7.68 ಲಕ್ಷ ಸರ್ಕಾರಿ ನೌಕರರ ಹುದ್ದೆಗಳಲ್ಲಿ 5.16ಲಕ್ಷ ನೌಕರರು ಮಾತ್ರ ಸೇವೆ ಸಲ್ಲಿಸುತ್ತಿದ್ದು, ಉಳಿದ 2.52ಲಕ್ಷ ಹುದ್ದೆಗಳು ಭರ್ತಿಯಾಗದೆ ಖಾಲಿ ಇರುವುದು ನಿಜವೇ; ಹೌದಾದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಯಾವ ಕ್ರಿಯಾ ಯೋಜನೆಯನ್ನು ಹಮ್ಮಿಕೊಂಡಿದೆ; ಈ ಹುದ್ದೆಗಳನ್ನು ಭರ್ತಿ ಮಾಡುವುದರಿಂದ ಸರ್ಕಾರಕ್ಕೆ ವಾರ್ಷಿಕವಾಗಿ ಸುಮಾರು ರೂ.8.00 ರಿಂದ ರೂ. 9.00 ಕೋಟಿಗಳಷ್ಟು ಆರ್ಥಿಕ ಹೊರೆ ಉಂಟಾಗಿದ್ದು, ಇದನ್ನು ಸರಿದೂಗಿಸಲು ಸರ್ಕಾರ ಯಾವ ಮಾರ್ಗಗಳನ್ನು ಕಂಡುಕೊಂಡಿದೆ (ವಿವರ</td><td>2022-23ನೇ ಸಾಲಿನಲ್ಲಿ ಅಪೆಂಡಿಕ್ಸ್-ಬಿ ಪ್ರಕಾರ ಮಂಜೂರಾದ, ಭರ್ತಿಯಾದ, ಮತ್ತು ಖಾಲಿಯಿರುವ ಹುದ್ದೆಗಳ ವಿವರ ಈ ಕೆಳಕಂಡಂತಿರುತ್ತದೆ.<br>
<table>
<tr><th>ಮಂಜೂರಾದ ಹುದ್ದೆಗಳು</th><th>ಭರ್ತಿಯಾದ ಹುದ್ದೆಗಳು</th><th>ಖಾಲಿಯಿರುವ ಹುದ್ದೆಗಳು</th></tr>
<tr><td>769981</td><td>511272</td><td>258709</td></tr>
</table>
ಸರ್ಕಾರವು ಒದಗಿಸುವ ಸೇವೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಮಾಹಿತಿ ಮತ್ತು ತಂತ್ರಜ್ಞಾನದ (ICT) ಬಳಕೆ ಮಾಡಿಕೊಳ್ಳಲಾಗುತ್ತಿದೆ. ಇದರಿಂದ ಸರಳವಾಗಿ ಹಾಗೂ ಸುಲಭವಾಗಿ ಸರ್ಕಾರದ ಸೇವೆಗಳನ್ನು ಪರಿಣಾಮಕಾರಿಯಾಗಿ ಮತ್ತು ಕಾಲಮಿತಿಯೊಳಗೆ ಒದಗಿಸಲು</td></tr>
</table>

| | | |
|---|---|---|
| | ನೀಡುವುದು). | ಸಾಧ್ಯವಾಗುತ್ತದೆ.<br><br>ಇಲಾಖೆಯಲ್ಲಿನ ಹುದ್ದೆಗಳನ್ನು ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳು ಎಂದು ಗುರುತಿಸಲಾಗಿದೆ. ಇವುಗಳ ಪೈಕಿ ಮುಂಬಡ್ತಿ ಹುದ್ದೆಗಳನ್ನು ಭರ್ತಿ ಮಾಡಲು ಆಡಳಿತ ಇಲಾಖೆಗಳಿಗೆ ಅಧಿಕಾರವಿರುತ್ತದೆ. ಅಂದರೆ ಆರ್ಥಿಕ ಇಲಾಖೆಯ ಅನುಮತಿ ಆವಶ್ಯಕತೆ ಇರುವುದಿಲ್ಲ. ನೇರ ನೇಮಕಾತಿ ಹುದ್ದೆಗಳಿಗೆ ಸಂಬಂಧಿಸಿದಂತೆ, ಪ್ರತಿ ಇಲಾಖೆಗೆ ನಿಗದಿಪಡಿಸಿರುವ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಅವಶ್ಯವಿರುವ ಸಿಬ್ಬಂದಿಯನ್ನು ಭರ್ತಿಮಾಡಲು ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ವೃಂದವಾರು ಪರಿಶೀಲಿಸಿ, ಅನುಮತಿ ನೀಡಲಾಗುತ್ತಿದೆ.<br><br>ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದರೂ ಸಹ ಇಲಾಖೆಗಳಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ, ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆಯಾಗದಂತೆ, ಅಗತ್ಯತೆಗೆ ಅನುಗುಣವಾಗಿ ಹುದ್ದೆಗಳ ಭರ್ತಿಗೆ ಸಹಮತಿ ನೀಡಲಾಗುತ್ತಿದೆ.<br><br>ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ 15,000 ಪಧವೀಧರ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಹಾಗೂ ಬಿಬಿಎಂಪಿಯಲ್ಲಿನ ಖಾಲಿಯಿರುವ 11133 ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಸಿಆಸು ಇಲಾಖೆಯ ದಿನಾಂಕ: 26.07.2005ರ ಸುತ್ತೋಲೆ ಅನ್ವಯ ಗ್ರೂಪ್-ಸಿ ವೃಂದದ ಕೆಲವು ಹುದ್ದೆ (ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ವಾಹನಚಾಲಕರು) ಮತ್ತುಗ್ರೂಪ್-ಡಿ ವೃಂದಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲುತಿಳಿಸಲಾಗಿದೆ. ಅದರಂತೆ, ಮಂಜೂರಾಗಿ ಖಾಲಿ ಇರುವ ಹುದ್ದೆಗಳ ಎದುರಾಗಿ, ಅಂದಾಜು 82,700 ಹುದ್ದೆಗಳನ್ನು (ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ವಾಹನ ಚಾಲಕರು) ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆ. |
| ಇ | 2022ನೇ ವರ್ಷದಲ್ಲಿ ಕೆ.ಪಿ.ಎಸ್.ಸಿ ಪ್ರಕಟಣೆ ಮಾಡಿದ 2017-18ನೇ ಸಾಲಿನ 106 ಗೆಜೆಟೆಡ್ ಪ್ರೊಬೇಷನರರ್ಸ್ ಹುದ್ದೆಗಳ ಆಯ್ಕೆಯಲ್ಲಿ ಸಂದರ್ಶನಕ್ಕೆ ಹಾಜರಾದ ಎಲ್ಲಾ ಅಭ್ಯರ್ಥಿಗಳ ಮುಖ್ಯ ಪರೀಕ್ಷೆಯ ಮತ್ತು ಸಂದರ್ಶನದ ಅಂಕಗಳನ್ನು ಜಾಲತಾಣದಲ್ಲಿ ಅಭ್ಯರ್ಥಿಗಳ ಮತ್ತು ಸಾರ್ವಜನಿಕರ ಮಾಹಿತಿಗಾಗಿ Marks Statement of Candidates eligible for personality Test ಪ್ರಕಟಿಸಿ ಪಾರದರ್ಶಕತೆ | ಕರ್ನಾಟಕ ಲೋಕಸೇವಾ ಆಯೋಗ ನೀಡಿರುವ ಮಾಹಿತಿಯಂತೆ, 2017-18ನೇ ಸಾಲಿನ 106 ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ಸಂದರ್ಶನಕ್ಕೆ ಆಯ್ಕೆಯಾದ ಎಲ್ಲಾ ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆ ಮತ್ತು ಸಂದರ್ಶನದ ಅಂಕಗಳನ್ನು ಪ್ರಕಟಿಸಲಾಗಿರುತ್ತದೆ. ನಂತರ ಮುಖ್ಯ ಪರೀಕ್ಷೆ ಬರೆದ ಎಲ್ಲಾ ಅಭ್ಯರ್ಥಿಗಳಿಗೆ Query basis ನಲ್ಲಿ ವಿಷಯವಾರು ಅಂಕಗಳ ಮಾಹಿತಿಯನ್ನು ನೀಡಲಾಗಿರುತ್ತದೆ. |

| | | |
|---|---|---|
| | ಕಾಯ್ದುಕೊಂಡಿರುವುದು ನಿಜವೇ; | |
| ಈ | ಹಾಗಿದ್ದಲ್ಲಿ, 2015ನೇ ಬ್ಯಾಚಿನ ಗೆಜೆಟೆಡ್ ಪ್ರೊಬೇಷನರಸ್ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಸಂದರ್ಶನಕ್ಕೆ ಹಾಜರಾದ ಎಲ್ಲಾ ಅಭ್ಯರ್ಥಿಗಳ ಮುಖ್ಯ ಪರೀಕ್ಷೆಯ ಹಾಗೂ ಸಂದರ್ಶನದ ಅಂಕಗಳನ್ನು ಕೆ.ಪಿ.ಎಸ್.ಸಿ ಜಾಲತಾಣದಲ್ಲಿ ಅಭ್ಯರ್ಥಿಗಳ ಮತ್ತು ಸಾರ್ವಜನಿಕರ ಮಾಹಿತಿಗಾಗಿ ಪ್ರಕರಟಿಸದಿರಲು ಕಾರಣವೇನು? ಪ್ರಕಟಿಸಿದ್ದಲ್ಲಿ, ಎಲ್ಲಾ ಅಭ್ಯರ್ಥಿಗಳ Marks Statement of Candidates eligible for personality Test ಪ್ರತಿಯನ್ನು ನೀಡುವುದು; | 2015ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ 428 ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸಿದ ನಂತರ ವ್ಯಕ್ತಿತ್ವ ಪರೀಕ್ಷೆಗೆ ಅರ್ಹತೆ ಹೊಂದಿದ ಎಲ್ಲಾ ಅಭ್ಯರ್ಥಿಗಳಿಗೆ ಅವರು ಮುಖ್ಯ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಮಾಹಿತಿಯನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ಅವರ ಇ-ಮೇಲ್ ವಿಳಾಸಕ್ಕೆ ಕಳುಹಿಸಲಾಗಿರುತ್ತದೆ. ನಂತರ ಮುಖ್ಯ ಪರೀಕ್ಷೆ ಬರೆದ ಎಲ್ಲಾ ಅಭ್ಯರ್ಥಿಗಳಿಗೆ Query basis ನಲ್ಲಿ ವಿಷಯವಾರು ಅಂಕಗಳ ಮಾಹಿತಿಯನ್ನು ನೀಡಲಾಗಿರುತ್ತದೆ. |
| ಉ | ಪ್ರಕಟಿಸದೇ ಇದ್ದಲ್ಲಿ, ಈಗಲಾದರೂ ಪ್ರಕಟಿಸಿ ಪಾರದರ್ಶಕತೆ ಕಾಯ್ದುಕೊಳ್ಳಲು ಸರ್ಕಾರ ಕ್ರಮಕೈಗೊಳ್ಳುವುದೇ? | ಅಭ್ಯರ್ಥಿಗಳು ಮುಖ್ಯ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮಾಹಿತಿಯನ್ನು ಕರ್ನಾಟಕ ಲೋಕಸೇವಾ ಆಯೋಗದ ಅಂತರ್ಜಾಲದಲ್ಲಿ Query basis ನಲ್ಲಿ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. |

ಸಂಖ್ಯೆ: ಸಿಆಸುಇ 24 ಎಸ್ಎಸ್‌ಸಿ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ